# ಮೈಸೂರು ವಿಶ್ವವಿದ್ಯಾನಿಲಯ

ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಸಿಂಡಿಕೇಟ್ ಸಭಾಂಗಣದಲ್ಲಿ ದಿನಾಂಕ: 13-10-2023ರ ಶುಕ್ರವಾರ ಪೂರ್ವಾಹ್ನ 11-30 ಗಂಟೆಗೆ ನಡೆದ "ನಾಲ್ಕನೇ ಸಾಮಾನ್ಯ ಸಿಂಡಿಕೇಟಿನ ಸಭೆ"ಯ ನಡವಳಿಗಳು.

<u>ಉಪಸ್ಥಿತರು:</u>

1. ಪ್ರೊ. ಎನ್.ಕೆ.ಲೋಕನಾಥ್ — ಕುಲಪತಿ ಹಾಗೂ ಅಧ್ಯಕ್ಷರು
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಪರವಾಗಿ ಪ್ರೊ. ಎ.ಹೆಚ್.ಎಂ.ವಿಜಯಲಕ್ಷ್ಮಿ, ಜಂಟಿ ನಿರ್ದೇಶಕರು ಕಾಲೇಜು ಶಿಕ್ಷಣ ಇಲಾಖೆ — ಸದಸ್ಯರು
3. ಶ್ರೀ ಸುರೇಶ್, ಕೆ.ಎ.ಎಸ್ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ — ಸದಸ್ಯರು
4. ಡಾ. ಟಿ.ಆರ್.ಚಂದ್ರಶೇಖರ್ — ಸದಸ್ಯರು
5. ಶ್ರೀ ಗೋಕುಲ್ ಗೋವರ್ಧನ್ — ಸದಸ್ಯರು
6. ಶ್ರೀಮತಿ ಸೌಮ್ಯ ಈರಪ್ಪ ಕೆ — ಸದಸ್ಯರು
7. ಪ್ರೊ. ಕೆ.ಎಂ.ಮಹದೇವನ್, ಕುಲಸಚಿವರು (ಪರೀಕ್ಷಾಂಗ) — ಸದಸ್ಯರು
8. ಶ್ರೀಮತಿ ಶೈಲಜ.ವಿ.ಆರ್., ಕೆಎಎಸ್ — ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿ
9. ಶ್ರೀಮತಿ ರೇಖಾ ಕೆ.ಎಸ್., ಕೆ.ಎಸ್.ಎ.ಎಸ್., ಹಣಕಾಸು ಅಧಿಕಾರಿಗಳು — ವಿಶೇಷ ಆಹ್ವಾನಿತರು

<u>ಅನುಪಸ್ಥಿತರು:</u>

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
3. ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.

ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರು ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ಸಭೆಗೆ ಹೃತ್ಪೂರ್ವಕವಾಗಿ ಸ್ವಾಗತಿಸಿದರು.

ಮೊದಲಿಗೆ, ಹೊಸದಾಗಿ ಹಣಕಾಸು ಅಧಿಕಾರಿಯಾಗಿ ಮೈಸೂರು ವಿಶ್ವವಿದ್ಯಾನಿಲಯ ಇಲ್ಲಿಗೆ ನೇಮಕಗೊಂಡಿರುವ ಶ್ರೀಮತಿ ರೇಖಾ.ಕೆ.ಎಸ್, ಕೆ.ಎಸ್.ಎ.ಎಸ್ ಹಾಗೂ ಗೌರವಾನ್ವಿತ ರಾಜ್ಯಪಾಲರಿಂದ ನಾಮನಿರ್ದೇಶನಗೊಂಡು ಹೊಸದಾಗಿ ಸಿಂಡಿಕೇಟ್ ಸದಸ್ಯರುಗಳಾಗಿ ನೇಮಕವಾಗಿರುವ ಡಾ. ಟಿ.ಆರ್. ಚಂದ್ರಶೇಖರ್ ಮತ್ತು ಶ್ರೀ ಗೊಕುಲ್ ಗೋವರ್ಧನ್ ಇವರುಗಳನ್ನು ಸಭೆಗೆ ಪರಿಚಯಿಸಿ ಸ್ವಾಗತಿಸಲಾಯಿತು.

ಸಿಂಡಿಕೇಟ್ ಸದಸ್ಯತ್ವದ ಅವಧಿ ಮುಕ್ತಾಯಗೊಂಡಿರುವ ಈ ಕೆಳಕಂಡವರುಗಳ ಸೇವೆಯನ್ನು ಸ್ಮರಿಸಿ ದಾಖಲಿಸಲಾಯಿತು.

- ಪ್ರೊ.ಮುಜ಼ಾಫರ್ ಹೆಚ್.ಅಸ್ಸಾದಿ, ಡೀನರು, ಕಲಾ ನಿಕಾಯ, ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು.
- ಡಾ.ಚೈತ್ರ ನಾರಾಯಣ್, ಸಿಂಡಿಕೇಟ್ ಸದಸ್ಯರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
- ಶ್ರೀ.ಎಂ.ಬಿ.ಗಪ್ಪಣ್ಣ, ಸಿಂಡಿಕೇಟ್ ಸದಸ್ಯರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
- ಡಾ.ಸಂಗೀತ ಗಜಾನನ ಭಟ್, ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
- ಡಾ. ನಿರ್ಮಲ, ಪ್ರಾಂಶುಪಾಲರು, ಸೇವಾ ಭಾರತಿ ಪ್ರಥಮ ದರ್ಜೆ ಕಾಲೇಜು, ಚಾಮರಾಜನಗರ.

* ಡಾ. ಹೆಚ್.ಎಸ್.ಗಂಗೇಗೌಡ, ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚನ್ನರಾಯಪಟ್ಟಣ.
* ಡಾ. ಜಯಶಂಕರ್.ಎನ್, ಪ್ರಾಂಶುಪಾಲರು, ಸಂತ ಜೋಸೆಫರ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ, ಮಂಡ್ಯ.

ಮಾನ್ಯ ಕುಲಪತಿಗಳು ಸಭೆಯಲ್ಲಿ ಉಪಸ್ಥಿತರಿದ್ದ ಸದಸ್ಯರುಗಳನ್ನು ಮತ್ತೊಮ್ಮೆ ಸ್ವಾಗತಿಸಿದರು ಹಾಗೂ ಮಾನ್ಯ ಕುಲಪತಿಗಳ ಅಪ್ಪಣೆಯ ಮೇರೆಗೆ ಕುಲಸಚಿವರು ಕಾರ್ಯಸೂಚಿಯನ್ನು ಮಂಡಿಸಿದರು.

| ವಿಷಯ ಸಂಖ್ಯೆ | ವಿಷಯ ಸಂಕ್ಷಿಪ್ತವಾಗಿ |
|---|---|
| ದಿನಾಂಕ: 25-05-2023 ರಂದು ಜರುಗಿದ "ಸಿಂಡಿಕೇಟಿನ ಮೂರನೇ ಸಾಮಾನ್ಯ ಸಭೆ"ಯ ನಡವಳಿಯನ್ನು ದೃಢೀಕರಿಸುವ ಬಗ್ಗೆ.<br>ಹಾಗೂ<br>ದಿನಾಂಕ: 14-06-2023 ರಂದು ಜರುಗಿದ "ಸಿಂಡಿಕೇಟಿನ ವಿಶೇಷ ಸಭೆ"ಯ ನಡವಳಿಯನ್ನು ದೃಢೀಕರಿಸುವ ಬಗ್ಗೆ. | |
| ದಿನಾಂಕ: 25-05-2023 ರಂದು ಜರುಗಿದ "ಸಿಂಡಿಕೇಟಿನ ಮೂರನೇ ಸಾಮಾನ್ಯ ಸಭೆ"ಯ ಹಾಗೂ ದಿನಾಂಕ: 14-06-2023 ರಂದು ಜರುಗಿದ "ಸಿಂಡಿಕೇಟಿನ ವಿಶೇಷ ಸಭೆ"ಯ ನಡವಳಿಗಳನ್ನು ಮತ್ತು ತೆಗೆದುಕೊಂಡಿರುವ ಕ್ರಮವನ್ನು ಸಿಂಡಿಕೇಟ್ ಸಭೆಯು ದೃಢೀಕರಿಸಿತು. | |
| ಸಾಮಾನ್ಯ ಸಭೆ 2023/4.1 | ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರೊಬ್ಬರ ಹೆಸರನ್ನು ನಾಮನಿರ್ದೇಶನ ಮಾಡುವ ಬಗ್ಗೆ. |
| ತೀರ್ಮಾನ | ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಡಾ. ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು ಇವರ ಕೋರಿಕೆ ಮೇರೆಗೆ ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ವಿಶ್ವವಿದ್ಯಾನಿಲಯದ ಒಬ್ಬರು ಸಿಂಡಿಕೇಟ್ ಸದಸ್ಯರನ್ನು ನಾಮನಿರ್ದೇಶನ ಮಾಡುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲು ಸಿಂಡಿಕೇಟ್ ಸಭೆಯು ನಿರ್ಣಯಿಸಿತು. |
| ಸಾಮಾನ್ಯ ಸಭೆ 2023/4.2 | ಡಾ. ಪಿ.ಮಾದೇಶ್, ಪ್ರಾಧ್ಯಾಪಕರು, ಭೂವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಚಾಮರಾಜನಗರ ವಿಶ್ವವಿದ್ಯಾನಿಲಯದ ಕುಲಸಚಿವ (ಪರೀಕ್ಷಾಂಗ) ಹುದ್ದೆಗೆ ನೇಮಿಸಿರುವ ಬಗ್ಗೆ. |
| ತೀರ್ಮಾನ | ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಡಾ. ಪಿ.ಮಾದೇಶ್, ಪ್ರಾಧ್ಯಾಪಕರು, ಭೂವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಚಾಮರಾಜನಗರ ವಿಶ್ವವಿದ್ಯಾನಿಲಯ, ಚಾಮರಾಜನಗರ ಇಲ್ಲಿಗೆ ಕುಲಸಚಿವ (ಪರೀಕ್ಷಾಂಗ) ಆಗಿ ನೇಮಕ ಮಾಡಿ ಅಧಿಸೂಚನೆ ಹೊರಡಿಸಿರುವ ಅನುಸಾರ ಡಾ. ಪಿ.ಮಾದೇಶ್ ಇವರನ್ನು ದಿನಾಂಕ: 29-03-2023 ರಂದು ವಿಶ್ವವಿದ್ಯಾನಿಲಯದ ಸೇವೆಯಿಂದ ಬಿಡುಗಡೆಗೊಳಿಸಿರುವ ಕ್ರಮವನ್ನು ಸಿಂಡಿಕೇಟ್ ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2023/4.3 | ಡಾ. ಎಸ್. ರವಿ, ಅಧ್ಯಕ್ಷರು ಹಾಗೂ ಪ್ರಾಧ್ಯಾಪಕರು, ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರಿಗೆ ಕೆನಡಾ ದೇಶಕ್ಕೆ ಹೋಗಿಬರಲು ಅನುಮತಿ ನೀಡಿದ್ದ ಬಗ್ಗೆ ಸಿಂಡಿಕೇಟ್ ಸಭೆಯ ಅನುಸಮರ್ಥನೆಗಾಗಿ. |
| ತೀರ್ಮಾನ | ಡಾ. ಎಸ್. ರವಿ, ಅಧ್ಯಕ್ಷರು ಹಾಗೂ ಪ್ರಾಧ್ಯಾಪಕರು, ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರು ದಿನಾಂಕ: 06-06-2023 ರಿಂದ 21-06-2023 ರವರೆಗೆ ಸ್ವಂತ ಕಾರ್ಯನಿಮಿತ್ತ ಇವರ ಹಕ್ಕಿನಲ್ಲಿರುವ ರಜೆಯನ್ನು |

| | |
|---|---|
| | ಉಪಯೋಗಿಸಿಕೊಂಡು ವಿಶ್ವವಿದ್ಯಾನಿಲಯಕ್ಕೆ ಯಾವುದೇ ಆರ್ಥಿಕ ಹೊಣೆ ಇಲ್ಲದಂತೆ ಕೆನಡಾ ದೇಶಕ್ಕೆ ಹೋಗಿಬರಲು ಅನುಮತಿ ನೀಡಿರುವುದನ್ನು ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2023/4.4 | ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಡಾ. ಕೆ.ಪ್ರಭು, ಸಹ ಪ್ರಾಧ್ಯಾಪಕರು, ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 04-11-2021 ರಿಂದ ಜಾರಿಗೆ ಬಂದಂತೆ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು, ಇವರ ಅವಧಿಯು ದಿನಾಂಕ 03-11-2023ಕ್ಕೆ ಮುಕ್ತಾಯಗೊಳ್ಳುತ್ತಿದೆ ಹಾಗೂ ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಪ್ರಾಧ್ಯಾಪಕರುಗಳ ಜೇಷ್ಠತೆಗನುಸಾರ ಸರದಿಯ ಮೇಲೆ ಡಾ. ವಿ.ಶೋಭಾ, ಸಹಾಯಕ ಪ್ರಾಧ್ಯಾಪಕರು ಇವರು ಹಿರಿಯರಾಗಿರುತ್ತಾರೆ ಎಂಬುದನ್ನು ಸಿಂಡಿಕೇಟ್ ಗಮನಿಸಿತು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000 ಪ್ರಕರಣ 34(7)ರ ಪ್ರಕಾರ ಡಾ. ವಿ.ಶೋಭಾ, ಸಹ ಪ್ರಾಧ್ಯಾಪಕರು, ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ 04-11-2023 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಅಥವಾ ಮುಂದಿನ ಆದೇಶದವರೆಗೆ, ಇವುಗಳಲ್ಲಿ ಯಾವುದು ಮೊದಲು ಘಟಿಸುವುದೋ, ಅಲ್ಲಿಯವರೆಗೆ ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2023/4.5 | ಉರ್ದು ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಡಾ. ಎಂ.ವಾಸಂತಿ, ಸಹ ಪ್ರಾಧ್ಯಾಪಕರು, ಹಿಂದಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 01-01-2022ರಿಂದ ಜಾರಿಗೆ ಬಂದಂತೆ ಉರ್ದು ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು, ಇವರ ಅವಧಿಯು ದಿನಾಂಕ: 31-12-2023ಕ್ಕೆ ಮುಕ್ತಾಯಗೊಳ್ಳುತ್ತಿದೆ ಹಾಗೂ ಉರ್ದು ಅಧ್ಯಯನ ವಿಭಾಗದ ಪ್ರಾಧ್ಯಾಪಕರುಗಳ ಜೇಷ್ಠತಾ ಪಟ್ಟಿಯ ಪ್ರಕಾರ ಖಾಯಂ ಪ್ರಾಧ್ಯಾಪಕರಾಗಲೀ/ಸಹಾಯಕ ಪ್ರಾಧ್ಯಾಪಕರಾಗಲೀ/ಸಹಾಯಕ ಪ್ರಾಧ್ಯಾಪಕರಾಗಲೀ ಯಾರು ಇರುವುದಿಲ್ಲ ಎಂಬುದನ್ನು ಸಿಂಡಿಕೇಟ್ ಗಮನಿಸಿತು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000 ಪ್ರಕರಣ 34(7)ರ ಪ್ರಕಾರ ಡಾ. ಎಂ.ವಾಸಂತಿ, ಸಹ ಪ್ರಾಧ್ಯಾಪಕರು, ಹಿಂದಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಮತ್ತೊಮ್ಮೆ ದಿನಾಂಕ: 01-01-2024 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಅಥವಾ ಮುಂದಿನ ಆದೇಶದವರೆಗೆ, ಇವುಗಳಲ್ಲಿ ಯಾವುದು ಮೊದಲು ಘಟಿಸುವುದೋ, ಅಲ್ಲಿಯವರೆಗೆ ಉರ್ದು ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2023/4.6 | ಹಿಂದಿ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಡಾ. ಎಂ. ವಾಸಂತಿ, ಸಹ ಪ್ರಾಧ್ಯಾಪಕರು, ಹಿಂದಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ 01-01-2022ರಿಂದ ಜಾರಿಗೆ ಬಂದಂತೆ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು, ಇವರ ಅವಧಿಯು ದಿನಾಂಕ: 31-12-2023ಕ್ಕೆ ಮುಕ್ತಾಯಗೊಳ್ಳುತ್ತಿದೆ ಹಾಗೂ ಹಿಂದಿ ಅಧ್ಯಯನ ವಿಭಾಗದ ಪ್ರಾಧ್ಯಾಪಕರುಗಳ ಜೇಷ್ಠತಾ ಪಟ್ಟಿಯ ಪ್ರಕಾರ ಡಾ. ಎಂ.ವಾಸಂತಿ, ಸಹ |

| | |
|---|---|
| | ಪ್ರಾಧ್ಯಾಪಕರು ಇವರೊಬ್ಬರನ್ನು ಹೊರತು ಖಾಯಂ ಪ್ರಾಧ್ಯಾಪಕರಾಗಲೀ/ಸಹಾಯಕ ಪ್ರಾಧ್ಯಾಪಕರಾಗಲೀ ಯಾರು ಇರುವುದಿಲ್ಲ ಎಂಬುದನ್ನು ಸಿಂಡಿಕೇಟ್ ಗಮನಿಸಿತು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000 ಪ್ರಕರಣ 34(7)ರ ಪ್ರಕಾರ ಡಾ. ಎಂ.ವಾಸಂತಿ, ಸಹ ಪ್ರಾಧ್ಯಾಪಕರು, ಹಿಂದಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಮತ್ತೊಮ್ಮೆ ದಿನಾಂಕ: 01-01-2024 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಅಥವಾ ಮುಂದಿನ ಆದೇಶದವರೆಗೆ, ಇವುಗಳಲ್ಲಿ ಯಾವುದು ಮೊದಲು ಘಟಿಸುವುದೋ, ಅಲ್ಲಿಯವರೆಗೆ ಹಿಂದಿ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2023/4.7 | ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಪ್ರೊ. ಎಸ್.ರವಿ, ಪ್ರಾಧ್ಯಾಪಕರು, ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ 04-11-2021ರಿಂದ ಜಾರಿಗೆ ಬಂದಂತೆ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು, ಇವರ ಅವಧಿಯು ದಿನಾಂಕ 03-11-2023ಕ್ಕೆ ಮುಕ್ತಾಯಗೊಳ್ಳುತ್ತಿದೆ ಹಾಗೂ ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕರುಗಳ ಜೇಷ್ಠತೆಗನುಸಾರವಾಗಿ ಸರದಿಯ ಮೇಲೆ ಪ್ರೊ. ಬಿ.ಎಸ್.ಬಿರಾದರ್ ಅವರು ಹಿರಿಯರಾಗಿರುತ್ತಾರೆ ಎಂಬುದನ್ನು ಸಿಂಡಿಕೇಟ್ ಗಮನಿಸಿತು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000 ಪ್ರಕರಣ 34(7)ರ ಪ್ರಕಾರ ಪ್ರೊ. ಬಿ.ಎಸ್.ಬಿರಾದರ್, ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ 04-11-2023 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಅಥವಾ ಮುಂದಿನ ಆದೇಶದವರೆಗೆ, ಇವುಗಳಲ್ಲಿ ಯಾವುದು ಮೊದಲುಘಟಿಸುವುದೋ, ಅಲ್ಲಿಯವರೆಗೆ ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2023/4.8 | ದಿನಾಂಕ: 10-04-2023ರಂದು ಜರುಗಿದ ತಾಂತ್ರಿಕ ಶಾಲೆಯ ಪ್ರಥಮ Board of Governor (BOG) ಸಭೆಯ ನಡವಳಿಯನ್ನು ಅನುಮೋದಿಸುವ ಬಗ್ಗೆ. |
| ತೀರ್ಮಾನ | ದಿನಾಂಕ: 10-04-2023ರಂದು ಜರುಗಿದ ತಾಂತ್ರಿಕ ಶಾಲೆಯ ಪ್ರಥಮ Board of Governor (BOG) ಸಭೆಯ ನಡವಳಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2023/4.9 | ಮೈಸೂರು ವಿಶ್ವವಿದ್ಯಾನಿಲಯದ ಲಲಿತ ಕಲಾ ಕಾಲೇಜಿನಲ್ಲಿ ಸ್ಥಾಪಿಸಲಾಗಿರುವ ಶ್ರೀ ಗುಬ್ಬಿ ವೀರಣ್ಣ ಪೀಠಕ್ಕೆ ವಿಷಯ/ರಂಗ ತಜ್ಞರನ್ನು ಆಹ್ವಾನಿಸುವ ಬಗೆಗೆ. |
| | ಕುಲಸಚಿವರು ಮೈಸೂರು ವಿಶ್ವವಿದ್ಯಾನಿಲಯದ ಲಲಿತಾ ಕಾಲೇಜಿನಲ್ಲಿ ಸ್ಥಾಪಿತವಾಗಿರುವ ಶ್ರೀ ಗುಬ್ಬಿ ವೀರಣ್ಣ ಪೀಠಕ್ಕೆ ಸಂದರ್ಶನ ಪ್ರಾಧ್ಯಾಪಕ/ವಿಷಯ/ರಂಗ ತಜ್ಞರನ್ನು ಆಹ್ವಾನಿಸುವ ವಿಷಯಕ್ಕೆ ಸಂಬಂಧಿಸಿದಂತೆ, ಕಾಲೇಜಿನ ಪ್ರಾಂಶುಪಾಲರು ಶಿಫಾರಸ್ಸು ಮಾಡಿ ಕಳುಹಿಸಿರುವಂತಹ ತಜ್ಞರುಗಳ ಪಟ್ಟಿಯಲ್ಲಿ ಶ್ರೀ ಯೋಗಾನಂದ್, ಡಾ. ಶ್ರೀಪಾದ ಭಟ್ ಹಾಗೂ ಡಾ. ಹೆಚ್.ಎಸ್. ಉಮೇಶ್ ಈ ಮೂವರು ತಜ್ಞರುಗಳ ಹೆಸರುಗಳನ್ನು ಕಳುಹಿಸಿರುತ್ತಾರೆ ಎಂದು ಸಭೆಗೆ ವಿಷಯವನ್ನು ಮಂಡಿಸಿದರು.<br>ನಂತರ ಮಾನ್ಯ ಸಿಂಡಿಕೇಟ್ ಸದಸ್ಯರಾದ ಶ್ರೀ ಗೋಕುಲ್ ಗೋವರ್ಧನ್ ಅವರು ಮಾತನಾಡಿ ತಜ್ಞರುಗಳ ಪೂರ್ಣಪ್ರಮಾಣದ ಸ್ವವಿವರಗಳನ್ನು ನೀಡಿದ್ದಾರೆಯೇ ಎಂಬುದರ ಬಗ್ಗೆ ಮಾಹಿತಿಯನ್ನು ಕೋರಿದರು. |

| | |
|---|---|
| | ತದನಂತರ ಮಾನ್ಯ ಕುಲಪತಿಗಳು ಮಾತನಾಡಿ ಮೂವರು ತಜ್ಞರುಗಳ ಹೆಸರುಗಳನ್ನು ಕಳುಹಿಸಿದ್ದಾರೆ. ಅವರುಗಳ ಸ್ವವಿವರಗಳನ್ನು ಲಗತ್ತಿಸಿಲ್ಲ ಎಂಬುದಾಗಿ ತಿಳಿಸಿ, ಜೊತೆಗೆ ತಜ್ಞರುಗಳನ್ನು ನೇಮಕ ಮಾಡುವ ಸಂದರ್ಭದಲ್ಲಿ ಅವರ ವಯೋಮಿತಿಯನ್ನು ಪರಿಗಣಿಸಬೇಕಾಗುತ್ತದೆ. ಆ ನಿಟ್ಟಿನಲ್ಲಿ ಡಾ. ಹೆಚ್.ಎಸ್. ಉಮೇಶ್ ಅವರ ವಯೋಮಿತಿಯು ಇನ್ನೂ ಮೂರು ತಿಂಗಳಿಗೆ ೭೦ ವರ್ಷಗಳು ಪೂರ್ಣಗೊಳ್ಳುವುದರಿಂದ ಅವರನ್ನು ನೇಮಕ ಮಾಡಲು ಸಾಧ್ಯವಾಗುವುದಿಲ್ಲವೆಂದು ತಿಳಿಸಿದರು.<br><br>ನಂತರ ಕುಲಸಚಿವರು ಮಾತನಾಡಿ ಈ ವಿಷಯದ ಬಗ್ಗೆ ಅಂತಿಮ ತೀರ್ಮಾನ ತೆಗೆದುಕೊಳ್ಳಲು ಮಾನ್ಯ ಕುಲಪತಿಗಳಿಗೆ ಅಧಿಕಾರವನ್ನು ನೀಡಬಹುದು ಎಂದು ಸಭೆಗೆ ತಿಳಿಸಿದರು.<br><br>ಮುಂದಿನ ಸಿಂಡಿಕೇಟ್ ಸಭೆಗಳಲ್ಲಿ ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿತಗೊಂಡಿರುವ ಪೀಠಗಳಿಗೆ ಸಂದರ್ಶನ ಪ್ರಾಧ್ಯಾಪಕ/ವಿಷಯ/ರಂಗ ತಜ್ಞರನ್ನು ಆಹ್ವಾನಿಸುವ ಸಂದರ್ಭದಲ್ಲಿ, ತಜ್ಞರುಗಳು ಆಯಾಯ ವಿಷಯದಲ್ಲಿ ಹೊಂದಿರುವಂತಹ ಪರಿಣಿತಿ ಹಾಗೂ ಅನುಭವಗಳ ಪೂರ್ಣ ಪ್ರಮಾಣದ ಮಾಹಿತಿ ಹಾಗೂ ಸ್ವವಿವರಗಳನ್ನು ಪಡೆದು ಮಂಡಿಸಿದಲ್ಲಿ ತೀರ್ಮಾನ ಕೈಗೊಳ್ಳಲು ಸಾಧ್ಯವಾಗುತ್ತದೆ ಎಂದು ಸಿಂಡಿಕೇಟ್‌ನ ಸದಸ್ಯರಾದ ಶ್ರೀ ಗೋಕುಲ್ ಗೋವರ್ಧನ್ ಅವರು ಸಭೆಗೆ ತಿಳಿಸಿದರು. |
| **ತೀರ್ಮಾನ** | ತೀರ್ಮಾನ : ಶ್ರೀ ಗುಬ್ಬಿ ವೀರಣ್ಣ ಪೀಠಕ್ಕೆ ವಿಷಯ/ರಂಗ ತಜ್ಞರನ್ನು ಆಹ್ವಾನಿಸುವ ಸಂಬಂಧ ವಿಶ್ವವಿದ್ಯಾನಿಲಯದ ಲಲಿತ ಕಲಾ ಕಾಲೇಜಿನ ಪ್ರಾಂಶುಪಾಲರಿಂದ ಮೂವರು ತಜ್ಞರುಗಳ ಸ್ವವಿವರಗಳನ್ನೊಳಗೊಂಡ ಪೂರ್ಣ ಪ್ರಮಾಣದ ಮಾಹಿತಿಯನ್ನು ಪಡೆದು ಪರಿಶೀಲಿಸಿ, ಶ್ರೀ ಗುಬ್ಬಿ ವೀರಣ್ಣ ಪೀಠಕ್ಕೆ ಸಂದರ್ಶಕ ಪ್ರಾಧ್ಯಾಪಕರನ್ನು ನೇಮಕ ಮಾಡುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲು *ಸಿಂಡಿಕೇಟ್* ಸಭೆಯು ತೀರ್ಮಾನಿಸಿತು. |
| **ಸಾಮಾನ್ಯ ಸಭೆ**<br>2023/4.10 | ಮೈಸೂರು ವಿಶ್ವವಿದ್ಯಾನಿಲಯದ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಸ್ಥಾಪಿಸಲಾಗಿರುವ ಶ್ರೀ ಎನ್.ರಾಚಯ್ಯ ಅಧ್ಯಯನ ಪೀಠಕ್ಕೆ ಸಂದರ್ಶನ ಪ್ರಾಧ್ಯಾಪಕರನ್ನು ಆಹ್ವಾನಿಸುವ ಬಗ್ಗೆ. |
| | ಕುಲಸಚಿವರು ಮೈಸೂರು ವಿಶ್ವವಿದ್ಯಾನಿಲಯದ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಸ್ಥಾಪಿಸಲಾಗಿರುವ ಶ್ರೀ ಎನ್. ರಾಚಯ್ಯ ಅಧ್ಯಯನ ಪೀಠಕ್ಕೆ ಸಂದರ್ಶನ ಪ್ರಾಧ್ಯಾಪಕರನ್ನು ಆಹ್ವಾನಿಸುವ ಸಂಬಂಧ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನೊಳಗೊಂಡ ಸಭೆಯು ಮೂವರು ತಜ್ಞರುಗಳ ಹೆಸರುಗಳನ್ನು ಶಿಫಾರಸ್ಸು ಮಾಡಿ ಕಳುಹಿಸಿರುವಂತಹ ಪಟ್ಟಿಯಲ್ಲಿ ಡಾ. ಹನುಮನಾಯಕ, ನಿವೃತ್ತ ಪ್ರಾಧ್ಯಾಪಕರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳೂರು, ಪ್ರೊ. ಎನ್. ರಾಜರಾಮ್ ತೋಲ್ಪಡಿ, ನಿವೃತ್ತ ಪ್ರಾಧ್ಯಾಪಕರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳೂರು, ಡಾ. ಶಿವಣ್ಣ, ಕೆಎಸ್‌ಆರ್‌ಡಿಪಿಆರ್ ವಿಶ್ವವಿದ್ಯಾನಿಲಯ, ಗದಗ *ಈ* ಮೂವರು ತಜ್ಞರುಗಳ ಹೆಸರುಗಳನ್ನು ಕಳುಹಿಸಿರುತ್ತಾರೆ ಎಂದು ಸಭೆಗೆ ವಿಷಯವನ್ನು ಮಂಡಿಸಿದರು.<br><br>ಸಿಂಡಿಕೇಟ್‌ನ ಸದಸ್ಯರುಗಳು ಮಾತನಾಡಿ ಶ್ರೀ ಎನ್. ರಾಚಯ್ಯನವರ ಬಗೆಗಿನ ಮಾಹಿತಿಯು ಮೈಸೂರು ಜಿಲ್ಲೆ ಹಾಗೂ ಬೆಂಗಳೂರು ಜಿಲ್ಲೆಯವರಿಗೆ ಇರುತ್ತದೆ. ಆದ್ದರಿಂದ ಶ್ರೀ ಎನ್. ರಾಚಯ್ಯನವರ ಬಗ್ಗೆ ಅಧ್ಯಯನ ನಡೆಸಿ, ಪರಿಣಿತಿ ಹಾಗೂ |

| | |
|---|---|
| | ಅನುಭವವನ್ನು ಹೊಂದಿರುವಂತಹ ಪ್ರಾಧ್ಯಾಪಕ/ವಿಷಯ ತಜ್ಞರುಗಳನ್ನು ಆಹ್ವಾನಿಸುವುದು ಸೂಕ್ತವೆಂದು ಹಾಗೂ ಉತ್ತರ ಕರ್ನಾಟಕದವರಿಗೆ ಇವರ ಬಗ್ಗೆ ಸರಿಯಾದ ಮಾಹಿತಿ ಇರುವುದಿಲ್ಲ ಎಂದು ಸಭೆಗೆ ತಿಳಿಸಿದರು.<br><br>ಮಾನ್ಯ ಕುಲಪತಿಗಳು ಮಾತನಾಡಿ ಒಂದೇ ವಿಶ್ವವಿದ್ಯಾನಿಲಯದ ಇಬ್ಬರು ತಜ್ಞರುಗಳ ಹೆಸರುಗಳನ್ನು ಶಿಫಾರಸ್ಸು ಮಾಡಿರುವಂತಹದ್ದು, ಡಾ. ಹನುಮ ನಾಯಕ ಇವರು ಈಗಾಗಲೇ ಶ್ರೀ ಎನ್. ರಾಚಯ್ಯ ಪೀಠದ ಆಹ್ವಾನಿತ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸಿರುವುದರಿಂದ ಬೇರೆಯವರಿಗೂ ಅವಕಾಶ ನೀಡಬೇಕೆಂದು ಸಭೆಗೆ ತಿಳಿಸಿದರು. |
| ತೀರ್ಮಾನ | ವಿಷಯ ತಜ್ಞರುಗಳ ಸ್ವವಿವರಗಳನ್ನೊಳಗೊಂಡ ಪೂರ್ಣ ಪ್ರಮಾಣದ ಮಾಹಿತಿಯೊಂದಿಗೆ ವಿಷಯವನ್ನು ಮುಂದಿನ ಸಿಂಡಿಕೇಟ್ ಸಭೆಗೆ ಮಂಡಿಸಲು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2023/4.11 | ಡಾ. ಎಸ್. ಲೋಕೇಶ್, ನಿವೃತ್ತ ಸಹ ಪ್ರಾಧ್ಯಾಪಕರು, ಜೈವಿಕ ತಂತ್ರಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರ ಪಿಂಚಣಿ ಸೌಲಭ್ಯಗಳ ಬಗ್ಗೆ. |
| | ಕುಲಸಚಿವರು ಡಾ. ಎಸ್. ಲೋಕೇಶ್, ನಿವೃತ್ತ ಸಹ ಪ್ರಾಧ್ಯಾಪಕರು, ಜೈವಿಕ ತಂತ್ರಜ್ಞಾನ ಅಧ್ಯಯನ ವಿಭಾಗ ಇವರ ಪಿಂಚಣಿ ಸೌಲಭ್ಯಗಳನ್ನು ನೀಡುವ ಬಗ್ಗೆ ಈಗಾಗಲೇ ಈ ವಿಷಯವು ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದಲ್ಲಿದ್ದು, ಅಂತಿಮ ತೀರ್ಪು ಬರದಿರುವುದರಿಂದಲೂ ಸಿಎಜಿ (ಭಾರತದ ಕಂಟ್ರೋಲರ್ ಮತ್ತು ಆಡಿಟರ್ ಜನರಲ್) ಆಡಿಟ್ ಆಕ್ಷೇಪಣೆಗೆ ಒಳಪಟ್ಟಿರುವುದರಿಂದಲೂ ಹಾಗೂ ಶ್ರೀ ಆರ್. ಅಶೋಕ್ ಅವರು ಅಧ್ಯಕ್ಷತೆಯನ್ನು ವಹಿಸಿದಂತ ಸದನ ಸಮಿತಿ ಸಭೆಗೆ ನಾನು ಹಾಗೂ ಮಾನ್ಯ ಕುಲಪತಿಗಳು ಭಾಗವಹಿಸಿದ್ದ ಸಂದರ್ಭದಲ್ಲಿ ಈ ವಿಷಯದ ಬಗ್ಗೆ ಪರಿಶೀಲನೆ ಮಾಡುವುದಾಗಿ ತಿಳಿಸಿರುತ್ತಾರೆ. ಹಾಗಾಗಿ ಇವರಿಗೆ ಪಿಂಚಣಿಯನ್ನು ನೀಡುವುದಕ್ಕಾಗುವುದಿಲ್ಲ ಎಂಬ ಅಂಶವನ್ನು ಸಭೆಯ ಗಮನಕ್ಕೆ ತಂದರು. |
| ತೀರ್ಮಾನ | ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯದ ಅಂತಿಮ ತೀರ್ಪು ಬಂದ ನಂತರ ಡಾ. ಎಸ್. ಲೋಕೇಶ್, ನಿವೃತ್ತ ಸಹ ಪ್ರಾಧ್ಯಾಪಕರು, ಜೈವಿಕ ತಂತ್ರಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರಿಗೆ ಪಿಂಚಣಿ ಸೌಲಭ್ಯವನ್ನು ನೀಡುವ ಬಗ್ಗೆ ಸಿಂಡಿಕೇಟ್ ಸಭೆಗೆ ವಿಷಯವನ್ನು ಮರು ಮಂಡಿಸಲು ಸಭೆಯು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2023/4.12 | M.Sc. Criminology and Forensic Science ಕೋರ್ಸ್‌ನ ಎರಡನೇ ಸೆಮಿಸ್ಟರ್‌ನ Research Methodology and Statistical Methods ಪತ್ರಿಕೆಯ ಫಲಿತಾಂಶವನ್ನು ಪ್ರಕಟಿಸಿರುವ ಬಗ್ಗೆ ವಿಷಯವನ್ನು ಸಿಂಡಿಕೇಟ್ ಸಭೆಯ ಅನುಸಮರ್ಥನೆಗಾಗಿ ಮಂಡಿಸಿದೆ. |
| | ಕುಲಸಚಿವ (ಪರೀಕ್ಷಾಂಗ) ಅವರು ಮಾತನಾಡಿ ಮಹಾರಾಜ ಕಾಲೇಜಿನ ವಿದ್ಯಾರ್ಥಿಗಳು ನವೆಂಬರ್ 2022ರಲ್ಲಿ ಎಂಎಸ್ಸಿ ಕ್ರಿಮಿನಾಲಜಿ ಮತ್ತು ಫಾರೆನ್ಸಿಕ್ ಸೈನ್ಸ್ ಕೋರ್ಸ್‌ನ ಎರಡನೇ ಸೆಮಿಸ್ಟರ್‌ನ Research Methodology and Statistical Methods (Code : 17212) ಪರೀಕ್ಷೆಯನ್ನು ಬರೆದಿದ್ದರು. ಈ ಸಂದರ್ಭದಲ್ಲಿ ಪರೀಕ್ಷೆ ಅಕ್ರಮವಾಗಿ ನಡೆದಿದೆ ಎಂಬುದರ ಬಗ್ಗೆ ಕೊಠಡಿಯ ಮೇಲ್ವಿಚಾರಕರಿಂದ ಯಾವುದೇ ಮಾಹಿತಿ ಅಥವಾ ಯಾವುದೇ ರೀತಿಯ ದೂರು ದಾಖಲಾಗಿರುವುದಿಲ್ಲ. ಉತ್ತರ ಪತ್ರಿಕೆಯನ್ನು ಪರಿಶೀಲಿಸುವ ಸಂದರ್ಭದಲ್ಲಿ ಒಬ್ಬ ಪ್ರಾಧ್ಯಾಪಕರು, 41 ವಿದ್ಯಾರ್ಥಿಗಳು ಅಕ್ರಮವಾಗಿ ಪರೀಕ್ಷೆಯನ್ನು ಬರೆದಿದ್ದಾರೆಂದು ಎಲ್ಲಾ ಪತ್ರಿಕೆಗಳಲ್ಲಿ ಒಂದು ಪ್ರಶ್ನೆಗೆ ಒಂದೇ ತೆರನಾದ ಉತ್ತರವನ್ನು ಬರೆದಿರುವುದರ ಬಗ್ಗೆ ವರದಿಯನ್ನು ನೀಡಿದ್ದರು. ಈ ವಿಷಯವನ್ನು ಹಿಂದೆ ನಡೆದಿದ್ದಂತಹ ಸಿಂಡಿಕೇಟ್ ಸಭೆಯಲ್ಲಿ ಮಂಡಿಸಲಾಗಿತ್ತು. ಜೊತೆಗೆ ಎಂಪಿಎಲ್ಇಸಿಯ ವಿಚಾರಣೆ ಹಾಗೂ ವರದಿಯನ್ವಯ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಯಾವುದೇ |

| | |
|---|---|
| | ಅಕ್ರಮವನ್ನು ಎಸಗಿರುವುದಿಲ್ಲ ಎಂಬುದರ ಬಗ್ಗೆ ಸವಿವರವಾಗಿ ಸಭೆಗೆ ವಿವರಿಸಿದರು. ಮಾನ್ಯ ಕುಲಪತಿಗಳು 41 ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಫಲಿತಾಂಶವನ್ನು ಪ್ರಕಟಿಸಿರುವುದರಿಂದ ಈ ವಿಷಯವನ್ನು ಅನುಸಮರ್ಥನೆಗಾಗಿ ಮಂಡಿಸಲಾಗಿದೆ ಎಂದು ಸಭೆಗೆ ತಿಳಿಸಿದರು. |
| **ತೀರ್ಮಾನ** | ಎಂ.ಪಿ.ಎಲ್.ಇ.ಸಿ. ಹಾಗೂ ತಜ್ಞರ ಸಮಿತಿಯು ನೀಡಿರುವ ವರದಿಯ ಶಿಫಾರಸ್ಸಿನ ಅನ್ವಯ, ಸಿಂಡಿಕೇಟ್ ಸಭೆಯ ನಿರ್ಣಯವನ್ನು ಕಾಯ್ದಿರಿಸಿ, ಮಾನ್ಯ ಕುಲಪತಿಯವರ ಅನುಮೋದನೆ ಮೇರೆಗೆ ಎಂಎಸ್ಸಿ ಕ್ರಿಮಿನಾಲಜಿ ಮತ್ತು ಫಾರೆನ್ಸಿಕ್ ಸೈನ್ಸ್ ಕೋರ್ಸ್‌ನ ಎರಡನೇ ಸೆಮಿಸ್ಟರ್‌ನ Research Methodology and Statistical Methods (Code : 17212) ಪತ್ರಿಕೆಯ 41 ವಿದ್ಯಾರ್ಥಿಗಳ ಫಲಿತಾಂಶವನ್ನು ಪ್ರಕಟಿಸಿರುವುದನ್ನು ಸಿಂಡಿಕೇಟ್ ಸಭೆಯು ಅನುಸಮರ್ಥಿಸಿತು. |
| **ಸಾಮಾನ್ಯ ಸಭೆ 2023/4.13** | ಪರೀಕ್ಷಾ ಅಕ್ರಮ ಹಾಗೂ ಲೋಪದೋಷಗಳ ವಿಚಾರಣಾ ಸಮಿತಿಯ ಶಿಫಾರಸ್ಸುಗಳು. |
| **ತೀರ್ಮಾನ** | ಜೂನ್ 2023 ಹಾಗೂ ಆಗಸ್ಟ್ 2023ರಲ್ಲಿ ನಡೆದ 2, 4 ಮತ್ತು 6ನೇ ಸೆಮಿಸ್ಟರ್ ಪದವಿ ಪರೀಕ್ಷೆಗಳಲ್ಲಿ 15 ವಿದ್ಯಾರ್ಥಿಗಳ ಪರೀಕ್ಷಾ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಪರೀಕ್ಷಾ ಅಕ್ರಮ ಹಾಗೂ ಲೋಪದೋಷಗಳ ವಿಚಾರಣಾ (ಎಂ.ಪಿ.ಎಲ್.ಇ.ಸಿ) ಸಮಿತಿಯು ವಿಚಾರಣೆ ನಡೆಸಿ ಸಲ್ಲಿಸಿರುವ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| **ಸಾಮಾನ್ಯ ಸಭೆ 2023/4.14** | ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಬಗ್ಗೆ. |
| **ತೀರ್ಮಾನ** | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 33 (1) ಮತ್ತು (2) ರನ್ವಯ ಗೃಹವಿಜ್ಞಾನ (ಸ್ನಾತಕ) ಅಧ್ಯಯನ ಮಂಡಳಿಯನ್ನು ಮೂರು ವರ್ಷಗಳ ಅವಧಿಗೆ ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲು ಸಭೆಯು ತೀರ್ಮಾನಿಸಿತು. |
| **ಸಾಮಾನ್ಯ ಸಭೆ 2023/4.15** | Specialized Programmes ಅಡಿಯಲ್ಲಿನ ಅಧ್ಯಯನ ಮಂಡಳಿಗಳ ರಚನೆ ಬಗ್ಗೆ- ಅನುಸಮರ್ಥನೆಗಾಗಿ. |
| **ತೀರ್ಮಾನ** | Specialized Programmes ಅಡಿಯಲ್ಲಿ ಮಾನ್ಯತೆ ನೀಡಲಾಗಿರುವ **1) Wiztoonz Academy of Media & Design, MIT ಕ್ಯಾಂಪಸ್, ಬೆಳವಾಡಿ, ಶ್ರೀರಂಗಪಟ್ಟಣ ತಾ., ಮಂಡ್ಯ ಜಿಲ್ಲೆ ಸಂಸ್ಥೆಗೆ** B.Sc. (Hons.) (Multimedia) and M.Sc. (Multimedia Design) (CB) **2) International Institute for Assisted Reproductive Technology and Research Center, Mysuru** ಸಂಸ್ಥೆಗೆ 1) Certificate Course in Clinical Embryology 2) PG Diploma in Andrology & Clinical Embryology and 3) M.Sc. (Assisted Reproduction and Embryology (CB) **3) Malabar College of Optometry, ದೇವಿನಗರ, ದೇವಿರಮ್ಮನಹಳ್ಳಿ, ನಂಜನಗೂಡುರಸ್ತೆ, ಮೈಸೂರು ಸಂಸ್ಥೆಗೆ** B.Sc. (Hons.) (Optometry & Eye Care) (UG) ಹಾಗೂ **4) IIFA Lancaster Degree College, # 55/A, ಅರ್ಕೇಶ್ವರ ದೇವಸ್ಥಾನ ರಸ್ತೆ, ಶ್ರೀನಿವಾಸಪುರ ಗೇಟ್, ಮಂಡ್ಯ ಸಂಸ್ಥೆಗೆ** 1) B.Des. (Hons.) (Advanced Interior Designing and 3D Visualization) 2) B.Des. (Hons) (Advanced Fashion Design and |

| | |
|---|---|
| | Textile Design) 3) M.Sc. (Animation and VFX) and 4) M.Sc. (Game Designing, Development and Virtual Reality) (CB) ಕೋರ್ಸ್‌ಗಳಿಗೆ ಪಠ್ಯಕ್ರಮಗಳನ್ನು ಸಿದ್ಧಪಡಿಸುವ ಸಂಬಂಧ ಮಾನ್ಯ ಕುಲಪತಿಯವರ ಆದೇಶಾನುಸಾರ ಸಿಂಡಿಕೇಟ್ ಸಭೆಯ ಅನುಮೋದನೆಯನ್ನು ಕಾಯ್ದಿರಿಸಿ ಅಧ್ಯಯನ ಮಂಡಳಿಗಳನ್ನು ರಚಿಸಿ, ಅಧಿಸೂಚನೆಗಳನ್ನು ಹೊರಡಿಸಲಾಗಿರುವ ಕ್ರಮವನ್ನು ಸಿಂಡಿಕೇಟ್ ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2023/4.16 | Malabar College of Optometry, ದೇವಿನಗರ 1ನೇ ಮುಖ್ಯ ರಸ್ತೆ, ದೇವಿರಮ್ಮನಹಳ್ಳಿ, ನಂಜನಗೂಡು ಇವರ ಸಂಸ್ಥೆಯಲ್ಲಿ Specialized Programme ಅಡಿಯಲ್ಲಿ B.Sc. (Hons.) (Optometry & Eye Care) ಕೋರ್ಸ್‌ಗಳನ್ನು ಪ್ರಾರಂಭಿಸಲು ಮಾನ್ಯತೆ ನೀಡಿರುವ ಬಗ್ಗೆ-ಅನುಸಮರ್ಥನೆಗಾಗಿ. |
| ತೀರ್ಮಾನ | ಪರಿವೀಕ್ಷಣಾ ಸಮಿತಿಯ ವರದಿಯ ಶಿಫಾರಸ್ಸಿನ ಅನ್ವಯ Malabar College of Optometry, ದೇವಿನಗರ 1ನೇ ಮುಖ್ಯ ರಸ್ತೆ, ದೇವಿರಮ್ಮನಹಳ್ಳಿ, ನಂಜನಗೂಡು ಸಂಸ್ಥೆಗೆ Specialized Programme ಅಡಿಯಲ್ಲಿ ಹೆಚ್ಚುವರಿಯಾಗಿ B.Sc. (Hons.) (Optometry & Eye Care) ಕೋರ್ಸ್‌ನ್ನು 40 ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯಾ ಮಿತಿಯೊಂದಿಗೆ 2023-24ನೇ ಸಾಲಿನಿಂದ ಪ್ರಾರಂಭಿಸಲು ಅನುಮತಿಸಿ ಅಧಿಸೂಚನೆ ಹೊರಡಿಸಿ ವಿಶ್ವವಿದ್ಯಾನಿಲಯವು ಕೈಗೊಂಡಿರುವ ಕ್ರಮವನ್ನು ಸಿಂಡಿಕೇಟ್ ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2023/4.17 | IIFA Lancaster Degree College, ಮಂಡ್ಯ ಇವರ ಸಂಸ್ಥೆಯಲ್ಲಿ Specialized Programme ಅಡಿಯಲ್ಲಿ ಹೆಚ್ಚುವರಿಯಾಗಿ 04 ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಮಾನ್ಯತೆ ನೀಡಿರುವ ಬಗ್ಗೆ-ಅನುಸಮರ್ಥನೆಗಾಗಿ. |
| ತೀರ್ಮಾನ | ಪರಿವೀಕ್ಷಣಾ ಸಮಿತಿಯ ವರದಿಯ ಶಿಫಾರಸ್ಸಿನ ಅನ್ವಯ IIFA Lancaster Degree College, # 55/A, ಅರ್ಕೇಶ್ವರ ದೇವಸ್ಥಾನ ರಸ್ತೆ, ಶ್ರೀನಿವಾಸಪುರ ಗೇಟ್, ಮಂಡ್ಯ ಸಂಸ್ಥೆಗೆ Specialized Programme ಅಡಿಯಲ್ಲಿ ಹೆಚ್ಚುವರಿಯಾಗಿ 1. B.Des. (Hons.) (Advanced Interior Designing and 3D Visualization) 2. B.Des. (Hons) (Advanced Fashion Design and Textile Design) 3. M.Sc. (Animation and VFX) 4. M.Sc. (Game Designing, Development and Virtual Reality) 4 ಹೊಸ ಕೋರ್ಸ್‌ಗಳನ್ನು 40 ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯಾಮಿತಿಯೊಂದಿಗೆ 2023-24ನೇ ಸಾಲಿನಿಂದ ಪ್ರಾರಂಭಿಸಲು ಅನುಮತಿಸಿ ಅಧಿಸೂಚನೆ ಹೊರಡಿಸಿರುವುದನ್ನು ಸಿಂಡಿಕೇಟ್ ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2023/4.18 | ಪರೀಕ್ಷಾ ಅಕ್ರಮ ಹಾಗೂ ಲೋಪದೋಷಗಳ ವಿಚಾರಣಾ ಸಮಿತಿಯ ಶಿಫಾರಸ್ಸುಗಳು. |
| ತೀರ್ಮಾನ | ಫೆಬ್ರವರಿ/ಮಾರ್ಚ್ 2023ರಲ್ಲಿ ನಡೆದ ಬಿ.ಎ/ಬಿ.ಎಸ್ಸಿ/ಬಿ.ಕಾಂ/ಬಿ.ಬಿ.ಎ 1, 3 ಹಾಗೂ 5ನೇ ಸೆಮಿಸ್ಟರ್ ಪದವಿ ಪರೀಕ್ಷೆಗಳಲ್ಲಿ ಪರೀಕ್ಷಾ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಪರೀಕ್ಷಾ ಅಕ್ರಮ ಹಾಗೂ ಲೋಪದೋಷಗಳ ವಿಚಾರಣಾ (ಎಂ.ಪಿ.ಎಲ್.ಇ.ಸಿ) ಸಮಿತಿಯು ವಿಚಾರಣೆ ನಡೆಸಿ ಸಲ್ಲಿಸಿರುವ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |

| | |
|---|---|
| ಸಾಮಾನ್ಯ ಸಭೆ 2023/4.19 | ಭಾರತಿ ಕಾಲೇಜು, ಭಾರತಿನಗರ, ಕೆ.ಎಂ. ದೊಡ್ಡಿ, ಮಂಡ್ಯ ಇವರು ಕೋರಿರುವ ಹೆಚ್ಚುವರಿ ಕೋರ್ಸ್‌ನ ಸಂಬಂಧ ಪರಿವೀಕ್ಷಣಾ ಸಮಿತಿ ಸಲ್ಲಿಸಿರುವ ವರದಿ ಬಗ್ಗೆ. |
| ತೀರ್ಮಾನ | ಪರಿವೀಕ್ಷಣಾ ಸಮಿತಿಯ ವರದಿಯ ಶಿಫಾರಸ್ಸಿನ ಅನ್ವಯ ಭಾರತಿಕಾಲೇಜು, ಭಾರತಿನಗರ, ಕೆ.ಎಂ. ದೊಡ್ಡಿ, ಮಂಡ್ಯ ಸಂಸ್ಥೆಗೆ ಹೆಚ್ಚುವರಿಯಾಗಿ B.B.A (Hons) (E-Commerce and Web Marketing) ಕೋರ್ಸಿಗೆ 40 ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯಾಮಿತಿಯೊಂದಿಗೆ 2023-24ನೇ ಸಾಲಿನಿಂದ ಪ್ರಾರಂಭಿಸಲು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2023/4.20 | ಅಧ್ಯಯನ ಮಂಡಳಿಗಳನ್ನು ಪುನರ್‌ರಚಿಸುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 33 (1) ಮತ್ತು (23)ರ ಪ್ರಕಾರ Architecture and Urban Design (UG & PG) ಮತ್ತು M.Tech in Urban and Regional Planning (PG) ವಿಷಯಗಳಲ್ಲಿ ಅಧ್ಯಯನ ಮಂಡಳಿಗಳನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲು ಸಭೆಯು ಅನುಮತಿಸಿತು. |
| ಸಾಮಾನ್ಯ ಸಭೆ 2023/4.21 | ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡಿರುವ ಸಂಬಂಧ ವಿಷಯವನ್ನು ಸಿಂಡಿಕೇಟ್ ಸಭೆಯ ಅನುಸಮರ್ಥನೆಗಾಗಿ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಪ್ರೊ. ಎಂ.ಚಂದ್ರಶೇಖರ್, ಪ್ರಾಧ್ಯಾಪಕರು, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ 05-10-2023 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲು ಘಟಿಸುವುದೋ, ಅಲ್ಲಿಯವರೆಗೆ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ಸಿಂಡಿಕೇಟ್ ಸಭೆಯ ಅನುಮೋದನೆಯನ್ನು ಕಾಯ್ದಿರಿಸಿ ನೇಮಕ ಮಾಡಿರುವುದನ್ನು ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2023/4.22 | ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣ ಕೇಂದ್ರಕ್ಕೆ ನಿರ್ದೇಶಕರನ್ನು ನೇಮಕ ಮಾಡಿರುವ ಸಂಬಂಧ ವಿಷಯವನ್ನು ಸಿಂಡಿಕೇಟ್ ಸಭೆಯ ಅನುಸಮರ್ಥನೆಗಾಗಿ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಪ್ರೊ. ಜೆ.ಸೋಮಶೇಖರ್, ಪ್ರಾಧ್ಯಾಪಕರು, ಡಾ. ಬಿ.ಆರ್.ಅಂಬೇಡ್ಕರ್ ಸಂಶೋಧನ ಹಾಗೂ ವಿಸ್ತರಣ ಕೇಂದ್ರ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ 05-10-2023 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲು ಘಟಿಸುವುದೋ, ಅಲ್ಲಿಯವರೆಗೆ ಡಾ. ಬಿ.ಆರ್.ಅಂಬೇಡ್ಕರ್ ಸಂಶೋಧನ ಹಾಗೂ ವಿಸ್ತರಣ ಕೇಂದ್ರದ ನಿರ್ದೇಶಕರನ್ನಾಗಿ ನೇಮಕ ಮಾಡಿರುವುದನ್ನು ಸಿಂಡಿಕೇಟ್ ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2023/4.23 | ಸಮಾಜಕಾರ್ಯ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡಿರುವ ಸಂಬಂಧ ವಿಷಯವನ್ನು ಸಿಂಡಿಕೇಟ್ ಸಭೆಯ ಅನುಸಮರ್ಥನೆಗಾಗಿ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಡಾ. ಹೆಚ್.ಎಸ್.ಚಂದ್ರಮೌಳಿ, ಸಹ ಪಾಧ್ಯಾಪಕರು ಸಮಾಜ ಕಾರ್ಯ ಅಧ್ಯಯನ |

| | |
|---|---|
| | ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ:05-10-2023 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲು ಘಟಿಸುವುದೋ, ಅಲ್ಲಿಯವರೆಗೆ ಸಮಾಜ ಕಾರ್ಯ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ಸಿಂಡಿಕೇಟ್ ಸಭೆಯ ಅನುಮೋದನೆಯನ್ನು ಕಾಯ್ದಿರಿಸಿ ನೇಮಕ ಮಾಡಿರುವುದನ್ನು ಸಭೆಯು ಅನುಸಮರ್ಥಿಸಿತು. |
| **ಸಾಮಾನ್ಯ ಸಭೆ** 2023/4.24 | 2019-20ನೇ ಸಾಲಿನ ಮೈಸೂರು ವಿಶ್ವವಿದ್ಯಾನಿಲಯದ ವಾರ್ಷಿಕ ಲೆಕ್ಕಪರಿಶೋಧನಾ ವರದಿಯ ಆಕ್ಷೇಪಣೆಗಳಿಗೆ ಅನುಪಾಲನಾ ವರದಿ. |
| **ತೀರ್ಮಾನ** | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ರ 47(3)ರಡಿ 2019-20ನೇ ಸಾಲಿನ ಮೈಸೂರು ವಿಶ್ವವಿದ್ಯಾನಿಲಯದ ವಾರ್ಷಿಕ ಲೆಕ್ಕಪರಿಶೋಧನಾ ವರದಿಯ ಕಂಡಿಕೆವಾರು ಆಕ್ಷೇಪಣೆಗಳಿಗೆ ಸಿದ್ಧಪಡಿಸಲಾಗಿರುವ ವಾರ್ಷಿಕ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಮತ್ತು ಸರ್ಕಾರಿ ಲೆಕ್ಕಪರಿಶೋಧಕರಿಗೆ ಕಳುಹಿಸಲು ಸಿಂಡಿಕೇಟ್ ಸಭೆಯು ಒಪ್ಪಿಗೆ ನೀಡಿತು. |
| **ಸಾಮಾನ್ಯ ಸಭೆ** 2023/4.25 | 2024ನೇ ಕ್ಯಾಲೆಂಡರ್ ವರ್ಷದಲ್ಲಿ ವಯೋಮಾನ ತಲುಪುವ ಉದ್ಯೋಗಿಗಳಿಗೆ ನಿವೃತ್ತಿ ಹೊಂದಲು ಅನುಮತಿ ನೀಡುವ ಬಗ್ಗೆ. |
| **ತೀರ್ಮಾನ** | ಮೈಸೂರು ವಿಶ್ವವಿದ್ಯಾನಿಲಯದ ವಿವಿಧ ವಿಭಾಗ/ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು/ಅಧ್ಯಾಪಕೇತರ ಹಾಗೂ ತಾಂತ್ರಿಕ ವರ್ಗದ ಉದ್ಯೋಗಿಗಳು 2024ನೇ ಕ್ಯಾಲೆಂಡರ್ ವರ್ಷದಲ್ಲಿ ವಯೋಮಾನ ತಲುಪಿರುವಂತವರಿಗೆ ನಿವೃತ್ತಿ ಹೊಂದಲು ಸಿಂಡಿಕೇಟ್ ಸಭೆಯು ಅನುಮತಿಸಿತು. |
| **ಸಾಮಾನ್ಯ ಸಭೆ** 2023/4.26 | ಕಲಾ ನಿಕಾಯದ ಡೀನರನ್ನು ನಾಮನಿರ್ದೇಶನ ಮಾಡುವ ಬಗ್ಗೆ. |
| | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000 ಪ್ರಕರಣ 21(1) ಪ್ರಕಾರ ಪ್ರೊ. ಮುಜಾಫರ್ ಹೆಚ್. ಅಸ್ಸಾದಿ, ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 01-07-2021 ರಿಂದ ಜಾರಿಗೆ ಬಂದಂತೆ ಕಲಾ ನಿಕಾಯದ ಡೀನರನ್ನಾಗಿ ನೇಮಕ ಮಾಡಲಾಗಿತ್ತು. ಡೀನರ ಎರಡು ವರ್ಷಗಳ ಅವಧಿಯು ದಿನಾಂಕ: 30-06-2023ಕ್ಕೆ ಅಂತ್ಯಗೊಂಡಿರುತ್ತದೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರವು ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿದ್ದ ಹಾಸನ, ಮಂಡ್ಯ ಮತ್ತು ಚಾಮರಾಜನಗರ ಸ್ನಾತಕೋತ್ತರ ಕೇಂದ್ರಗಳನ್ನು ಪ್ರತ್ಯೇಕ ವಿಶ್ವವಿದ್ಯಾನಿಲಯಗಳನ್ನಾಗಿ ಸ್ಥಾಪನೆ ಮಾಡಿ ಅಲ್ಲಿಗೆ ಕುಲಪತಿ, ಕುಲಸಚಿವರುಗಳನ್ನು ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಲಾಗಿರುವುದನ್ನು ಹಾಗೂ ಹಾಸನ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರಾದ ಪ್ರೊ. ಬಿ. ಮಹದೇವಪ್ಪ ಅವರು ಮೈಸೂರು ವಿಶ್ವವಿದ್ಯಾನಿಲಯದ ವಾಣಿಜ್ಯ ನಿಕಾಯದ ಡೀನರಾಗಿರುವುದನ್ನು ಸಿಂಡಿಕೇಟ್ ಗಮನಿಸಿತು. ಮುಂದುವರೆದು, ಪೂರ್ಣವಾಗಿ ವಿಶ್ವವಿದ್ಯಾನಿಲಯದ ಉದ್ಯೋಗಿಗಳ ಸೇವೆಗೆ ಸಂಬಂಧಿಸಿದಂತೆ ಕೆಲಸಗಳನ್ನು ವಿಶ್ವವಿದ್ಯಾನಿಲಯದಲ್ಲಿಯೇ ಕಾರ್ಯ ನಿರ್ವಹಿಸುತ್ತಿರುವುದರಿಂದ ಸರ್ಕಾರದ ಅಂತಿಮ ಆದೇಶವನ್ನು ಕಾಯ್ದಿರಿಸಿ, ಪ್ರೊ. ಎಂ.ಜಿ. ಮಂಜುನಾಥ್, ಪ್ರಾಧ್ಯಾಪಕರು ಇವರನ್ನು ಮುಂದಿನ ಆದೇಶದವರೆಗೆ ಕಲಾ ನಿಕಾಯದ ಡೀನರನ್ನಾಗಿ ನಾಮನಿರ್ದೇಶನ ಮಾಡಲು ಸಭೆಯಲ್ಲಿ ಚರ್ಚಿಸಲಾಯಿತು. |
| **ತೀರ್ಮಾನ** | ಸರ್ಕಾರದ ಆದೇಶವನ್ನು ಕಾಯ್ದಿರಿಸಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000 ಪ್ರಕರಣ 21(1)ರ ಪ್ರಕಾರ ಪ್ರಾಧ್ಯಾಪಕರುಗಳ ಜೇಷ್ಠತಾ ಪಟ್ಟಿಯಲ್ಲಿ ಹಿರಿಯರಾಗಿರುವ ಪ್ರೊ. ಎಂ.ಜಿ. ಮಂಜುನಾಥ್, ಪ್ರಾಧ್ಯಾಪಕರು, ಕನ್ನಡ ವಿಭಾಗ, ಸ್ನಾತಕೋತ್ತರ ಕೇಂದ್ರ, ಹೇಮಗಂಗೋತ್ರಿ, ಹಾಸನ ಇವರನ್ನು ಈ ತಕ್ಷಣದಿಂದ ಜಾರಿಗೆ |

| | |
|---|---|
| | ಬಂದಂತೆ ಮುಂದಿನ ಆದೇಶದವರೆಗೆ ಕಲಾ ನಿಕಾಯದ ಡೀನರಾಗಿ ನಾಮನಿರ್ದೇಶನ ಮಾಡಲು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| **ಸಾಮಾನ್ಯ ಸಭೆ 2023/4.27** | ವಿಶ್ವವಿದ್ಯಾನಿಲಯದ 2022-23ನೇ ಸಾಲಿನ ವಾರ್ಷಿಕ ವರದಿಯ ಪರಿಶೀಲನೆ ಹಾಗೂ ಅನುಮೋದನೆ ಬಗ್ಗೆ. |
| **ತೀರ್ಮಾನ** | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000ರ ಪ್ರಕರಣ 50(1) ಪ್ರಕಾರ ಸಿದ್ಧಪಡಿಸಲಾಗಿರುವ ವಿಶ್ವವಿದ್ಯಾನಿಲಯದ 2022-23ನೇ ಸಾಲಿನ ವಾರ್ಷಿಕ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |

ಇತರೆ ವಿಷಯಗಳು:

ಮಾನ್ಯ ಕುಲಪತಿಗಳು ಮಾತನಾಡಿ ಸಿಂಡಿಕೇಟ್‌ನ ಸದಸ್ಯರಾದ ಶ್ರೀ ಗೋಕುಲ್ ಗೋವರ್ಧನ್ ಅವರು ಹಾಸ್ಟೆಲ್‌ನ ವಿದ್ಯಾರ್ಥಿಗಳಿಗೆ ಆಹಾರದ ವ್ಯವಸ್ಥೆ ಸರಿಯಾಗಿಲ್ಲ ಎಂದು ತಿಳಿಸಿದ್ದರು. ಆ ವಿಷಯವಾಗಿ ಟೆಂಡರ್‌ನ್ನು ಕರೆದು ಹಾಸ್ಟೆಲ್‌ಗಳಿಗೆ ದಿನಸಿ, ಹಾಲು-ಮೊಸರು ಮತ್ತು ತರಕಾರಿಗಳನ್ನು ಸರಬರಾಜು ಮಾಡಬೇಕಾಗಿರುತ್ತದೆ. ಹಾಗೂ ಕೆಲವೊಂದು ಪದಾರ್ಥಗಳ ಬೆಲೆ ಏರಿಕೆಯಾಗಿರುವುದರಿಂದ ಎಲ್ಲವನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಹೊಸ ಟೆಂಡರ್‌ನ್ನು ಕರೆಯಲು ವ್ಯವಸ್ಥೆಯನ್ನು ಮಾಡಲಾಗುತ್ತದೆ. ಟೆಂಡರ್‌ಅನ್ನು ಕರೆಯಲು 2-3 ತಿಂಗಳುಗಳ ಕಾಲವಕಾಶ ಬೇಕಾಗಿರುತ್ತದೆ. ಆದ್ದರಿಂದ ಮೂರು ತಿಂಗಳುಗಳ ಕಾಲ ಪ್ರಸ್ತುತ ದಿನಸಿ ಪದಾರ್ಥಗಳನ್ನು ಸರಬರಾಜು ಮಾಡುತ್ತಿರುವವರಿಂದಲೇ, ಈಗ ನೀಡುತ್ತಿರುವ ಬೆಲೆಯಲ್ಲಿಯೇ ಖರೀದಿಸಲು ಸಭೆಯ ಅನುಮತಿ ಬೇಕಾಗಿರುತ್ತದೆ ಎಂದು ಕೋರಿದರು.

ನಂತರ ಕುಲಸಚಿವರು ಮಾತನಾಡಿ ಟೆಂಡರ್‌ನ್ನು ಪಾರದರ್ಶಕವಾಗಿ ಹಾಗೂ ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ನಿಯಮಾನುಸಾರ ಕರೆಯಲಾಗುವುದು ಎಂದು ತಿಳಿಸಿದರು.

ತೀರ್ಮಾನ: ಹಾಸ್ಟೆಲ್‌ಗಳಿಗೆ ದಿನಸಿ, ಹಾಲು-ಮೊಸರು ಹಾಗೂ ತರಕಾರಿಗಳನ್ನು ಪ್ರಸ್ತುತ ಸರಬರಾಜು ಮಾಡುತ್ತಿರುವವರಿಂದಲೆ ಹಾಗೂ ಕೆಲವು ಪದಾರ್ಥಗಳ ಬೆಲೆಯನ್ನು ಹೆಚ್ಚುವರಿ ಮಾಡಿ ನಿಗದಿಪಡಿಸಿರುವಂತಹ ಬೆಲೆಯಲ್ಲಿಯೇ 2-3 ತಿಂಗಳುಗಳ ಕಾಲ ಖರೀದಿಸಲು ಹಾಗೂ ಟೆಂಡರ್‌ನ್ನು ನಿಯಮಾನುಸಾರ ಕರೆಯಲು ಸಹ ಸಿಂಡಿಕೇಟ್ ಸಭೆಯು ಅನುಮೋದಿಸಿತು.

ಅಂತಿಮವಾಗಿ, ಕುಲಸಚಿವರು ಸಭೆಯಲ್ಲಿ ಮುಕ್ತವಾಗಿ ಚರ್ಚಿಸಿ ಸೂಕ್ತ ನಿರ್ಣಯಗಳನ್ನು ತೆಗೆದುಕೊಳ್ಳಲು ಸಹಕರಿಸಿದ ಅಧ್ಯಕ್ಷರು ಹಾಗೂ ಎಲ್ಲಾ ಸದಸ್ಯರುಗಳಿಗೆ ವಂದನೆಗಳನ್ನರ್ಪಿಸುವ ಮೂಲಕ ಸಭೆಯು ಮುಕ್ತಾಯವಾಯಿತು.

ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿ

ಕುಲಪತಿಗಳು ಹಾಗೂ ಅಧ್ಯಕ್ಷರು